-ಸದರೀ ದರಖಾಸ್ತುದಾರರಾದ ಪುಟ್ಟಸ್ವಾಮಿಶೆಟ್ಟರ ಅರ್ಜಿಯನ್ನು 1896ನೇ ಇಸವಿ ಡಿಸೆಂಬರ್ ತಿಂಗಳ ತಾರೀಖು 14ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯುತಕ್ಕ ಬಾಧ್ಯತೆಯು ವಿಮರ್ಶ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಚಿಕ್ಕಪದ್ಮಣ್ಣ ಶೆಟ್ಟರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬—೯೭ನೇ ಇಸವಿ ಅರ್ಜೀ ನಂಬರ್ 202.

ಮೃತಪಟ್ಟ ಕಾವೇರಮ್ಮನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಅಮ್ಮಣ್ಣಯ್ಯಮ್ಮ ಪುರಭೆ ವಂಶ ಲಕ್ಷ್ಮಮ್ಮನು, ಮೃತಪಟ್ಟ ಸದರೀ ಕಾವೇರಮ್ಮನವರಿಗೆ ತಂಗಿ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಲಷ್ಕರ್ ನೊಪಲಾ ಸ್ಥಳದ ಸದರೀ ಅಮ್ಮಣ್ಣಯ್ಯಮ್ಮ ಪುರಭೆ ವಂಶ ಲಕ್ಷ್ಮಮ್ಮನವರು ಸದರೀ ವಾಸಸ್ಥರಾಗಿ ಮೃತಪಟ್ಟ ಕಾವೇರಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ 200 ರೂಪಾಯಿ ಸಾಲವನ್ನು ವಸೂಲ್ಮಾಡುವದಕೆ ಸ್ ೧೮೬೦ನೇ ಇಸವಿ 27ನೇ ಆಕ್ಟು ಮೇರಗೆ ಸರ್ಟಿಫಿಕೇಟಿಬ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಅಮ್ಮಣ್ಣಯ್ಯಮ್ಮ ಪುರಭೆ ವಂಶ ಲಕ್ಷ್ಮವ್ಮನವರ ಅರ್ಜಿಯನ್ನು ಸ್ ೧೮೯೬ನೇ ಇಸವಿ ಡಿಸೆಂಬರ್ ತಿಂಗಳ ತಾರೀಖು 4ರಲ್ಲು ಕೇ. ಸರ್ಟಿಫಿಕೇಟ್ ಪಡೆಯುತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕಾವೇರಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೯೬ನೇ ಇಸವಿ ನವಂಬರ್ ತಿಂಗಳ 12ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಬಿ. ತಿರುಮಲಾಚಾರ್ಲು,
ಡಿಸ್ಟ್ರಿಕ್ಟು ಜಡ್ಜ್.

ಮೈಸೂರ್ ಡಿಸ್ಟ್ರಿಕ್ಟು ಫಾರೆಸ್ಟ್ ಇಲಾಖಾ.

ಇಸ್ತಿಹಾರ್‌ನಾಮೆ.

ಸ್ ೧೮೯೬ನೇ ಇಸವಿ ಅಕ್ಟೋಬರ್ ತಾರೀಖು 24ರಲ್ಲು.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಗುಂಡ್ಲು ತಾಲ್ಲೂಕು ಬೆರಂಬಾಡಿ ಮತ್ತು ಬಂಡಿಪುರದ ಜಂಗಲ್ ಗಳಲ್ಲಿ ವಣ ಚೌಬೀನೆಯನ್ನು ಖರೀದಿಗೆ ಪಡಿಯಲು ಯಿಷ್ಟವುಳ್ಳವರು ಮೈಸೂರು ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರಿಗೆ ಆಗಲಿ ಅಥವಾ ಗುಂಡ್ಲು ರೇಂಜಾಫಿಸರಿಗಾಗಲಿ ದರಖಾಸ್ತುಗಳನ್ನು ಕೊಡಬಹುದು.

2. ದರಖಾಸ್ತುದಾರ ಸದರೀ ಚೌಬೀನೆಯನ್ನು ಜಂಗಲ್‌ಗಳಲ್ಲಿ ತಯಾರು ಮಾಡಿಸಿ ಸಾಗಿಸಿಕೊಳ್ಳಬೇಕು. ಮತ್ತು ಈ ಭಾಗದಲ್ಲಿ ಜಾರಿಯಲ್ಲಿರುವ ರೂಲ್ಸ್‌ಗಳಿಗೆ ಬದ್ಧನಾಗಿರತಕ್ಕದ್ದು.

3. ಈ ಚೌಬೀನೆಗಳು ಮೈಸೂರು ಉಡ್ಡಿಯಾರ್ಡ್ ಮತ್ತು ಗುಂಡ್ಲು ಡಿಪೋ ದರಗಳಂತೆ ಆಯಾಯ ಜಂಗಲ್ ತಯಾರಿ ಮತ್ತು ಲೈ ಛಾರ್ಜು ಜಾತಾ ಬೆಕರಿ ಮಾಡಲ್ಪಡುತ್ತವೆ.

4. ಖರೀದಿಗೆ ಪಡಿಯಲೂ ಇಷ್ಟವುಳ್ಳವರು ಈ ವಿಷಯವಾಗಿ ಹಾಸ್ತೀ ತಖ್ಮೀಲ್ ತಿಳಿಯಬೇಕೆಂದು ಸುತೂಹಲ ವಿದ್ದಲ್ಲಿ ಗುಂಡ್ಲು ರೇಂಜಾಫಿಸರಿಗೆ ಆಥವಾ ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರವರಿಗೆ ಅರ್ಜಿ ಗುಜರಾಯಿಸಿ ಕೊಳ್ಳಬಹುದಾಗಿರುತ್ತೆ.

ಎಂ. ರಾಮರಾವ್,
ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರ್.

ನಗರದ ಡಿವಿಜ್ ಡಿಸ್ಟ್ರಿಕ್ಟು ಜಡ್ಜ್‌ಯವರ ಕೋರ್ಟಿನಲ್ಲಿ.

ಸ್ ೧೮೯೬—೯೭ನೇ ಇಸವಿ ವಿ॥ ಅರ್ಜಿ ನಂಬರು 108.

ಅರ್ಜೀದಾರ ಸಾಗರದ ತಾಲ್ಲೂಕು ಕರೂರು ವಾಸಸ್ಥ ಶಾಮಂಣ ಎಂಬವರು ಮೈಸರಾಪ ಸಾಗರ ತಾಲ್ಲೂಕು ಕರೂರು ಸ್ಥಳದ ಸೂರಪ್ಪ, ಸುಬ್ಬಮ್ಮ ಇವರ ಆಸ್ತಿವಿಷಯದಲ್ಲಿ—

ಸದರೀ ಮೈನರಾವ ಸೂರಪ್ಪ, ಸುಬ್ಬಮ್ಮ ಇವರಿಗೆ ಆಂಣನು ಆಗಬೇಕೆಂಬ ಹಕ್ಕಿನ ಮೇಲೆ ಸಾಗರ ತಾಲ್ಲೂಕು ಕರೂರು ಸ್ಥಳದಲ್ಲಿದ್ದ ಸೂರಯ್ಯನ ಅಯ್ಯಪ್ಪನ ಮಗನಾದ ಕರೂರು ಶಾಮಂಣನು ಸದರೀ ಮೈನರರ ಆಸ್ತಿ ಕಾವಾಡುವದಕ್ಕೆ ಸರಟಿಫಿಕೇಟ್ ಬಗ್ಯೆ ಅರ್ಜಿ ಕೊಟ್ಟು ಇರುತ್ತಾನೆ. ಸದರೀ ಅರ್ಜಿ ಹಿಯರಿಂಗ್ ಬಗ್ಯೆ 1896ನೇ ಇಸವಿ ನವಂಬರ್ ತಾರೀಖು 27ರಲ್ಲು ಮೊಕರರು ಮಾಡಿರುವದಾಗಿ ಇದರಿಂದ ನೋಟಿಸ್ ಕೊಡಲಾಗಿದೆ.

1896ನೇ ಇಸವಿ ನವಂಬರ್ ತಿಂಗಳ 2ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಎಂ. ರಾಮಸ್ವಾಮಿ ಅಯ್ಯರ್,
ಡಿಸ್ಟ್ರಿಕ್ಟು ಜಡ್ಜ್.

ಶಿವಮೊಗ್ಗ ಡಿಸ್ಟ್ರಿಕ್ಟು.

ಫಾರೆಸ್ಟು ಇಲಾಖಾ.

ನೋಟಿಫಿಕೇಷನ್.

ಸ್ ೧೮೭೮ನೇ ಇಸವಿ ಫಾರೆಸ್ಟ್ ರೂಲ್ಸ್ 37ನೇ ಸೆಕ್ಷನ್ ಅನುಸರಿಸಿ ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಶಿವಮೊಗ್ಗಾ ಡಿಸ್ಟ್ರಿಕ್ಟು ಶಿವಮೊಗ್ಗಾ ತಾಲ್ಲೂಕು ಬೆಂಕಿಪುರದ ಟ್ರಾವಲರಸ್ ಬಂಗ್ಲೆಬಳಿ ಭದ್ರಾನದಿಯಲ್ಲಿ ಈ ಕೆಳಗೆ ನಮೂದಿಸಿರುವ ನಾಟಾ ತೇಲಿಬಂದು ಸಿಕ್ಕಿ ಇರುತ್ತೆ.